ಜಗಜೀವನರಾಮ್ ಭವನ ನಿರ್ಮಾಣ

100 : (169)

ಶ್ರೀ ರೇವಣ್ಣ.ಹೆಚ್.ಡಿ. (ಹೊಳೆನರಸೀಪುರ)

ಅ) ರಾಜ್ಯದ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದಲ್ಲಿ ಜಗಜೀವನರಾಮ್ ಭವನವನ್ನು ಸ್ಥಾಪಿಸಲು ಸರ್ಕಾರ ಮಂಜೂರಾತಿ ನೀಡಲಾಗಿದೆಯೇ;

ಆ) ಹಾಗಿದ್ದಲ್ಲಿ, ಈ ಭವನವನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಪೂರ್ಣ ಮಾಹಿತಿ ನೀಡುವುದು)?

ಶ್ರೀ ಎ. ನಾರಯಣಸ್ವಾಮಿ (ಮಾನ್ಯ ಸಮಾಜ ಕಲ್ಯಾಣ, ಬಂಧಿಖಾನೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ಹೊಳೆನರಸೀಪುರ ಪಟ್ಟಣದ ಗಾಂಧಿನಗರ ಬಡಾವಣೆಯಲ್ಲಿ ಡಾ: ಬಾಬು ಜಗಜೀವನರಾಮ್ ಭವನವನ್ನು ನಿರ್ಮಿಸಲು ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಮಂಜೂರಾತಿ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಖಾಲಿ ಇರುವ ಹುದ್ದೆಗಳು

101 : (170)

ಶ್ರೀ ರೇವಣ್ಣ.ಹೆಚ್.ಡಿ.(ಹೊಳೆನರಸೀಪುರ)

ಅ) ರಾಜ್ಯದಲ್ಲಿರುವ ಸಮಾಜ ಕಲ್ಯಾಣ ಇಲಾಖೆಗಳ ಹಾಸ್ಟೆಲ್‌ಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು (ಹುದ್ದೆಗಳವಾರು, ವಿಧಾನಸಭಾವಾರು ಪೂರ್ಣ ಮಾಹಿತಿ ನೀಡುವುದು);

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಪೂರ್ಣ ಮಾಹಿತಿ ನೀಡುವುದು)?

ಶ್ರೀ ಎ.ನಾರಾಯಣಸ್ವಾಮಿ (ಮಾನ್ಯ ಸಮಾಜ ಕಲ್ಯಾಣ, ಬಂಧಿಖಾನೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)